## 40. ಸಮಸ್ತ ಸ್ವಾಭಿಮಾನಿ ಭಾರತೀಯರಿಗೆ ಪ್ರಧಾನಿ ಮೋದಿ ಬಹಿರಂಗ ಪತ್ರ

ನಿತ್ಯ 16–18 ಗಂಟೆ ದೇಶಕ್ಕಾಗಿ ದುಡಿಮೆ, ವಿರಾಮದ ಜಪವಿಲ್ಲ, ಕೊಂಚವೂ ದಣಿಯದೆ ಪ್ರಚಂಡ ಉತ್ಸಾಹದಲ್ಲಿ 6 ವರ್ಷದಿಂದ ಭಾರತವನ್ನು ಮುನ್ನಡೆಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ 2.0 ಸರ್ಕಾರದ ಮೊದಲ ವರ್ಷ ಎಂದಿನಂತೆ ಇರಲಿಲ್ಲ. ಕೊರೊನಾದ ಸಂಕಷ್ಟಕ್ಕೆ ಸಿಲುಕಿರುವ ದೇಶವಾಸಿಗಳಿಗೆ ಚೈತನ್ಯ ತುಂಬಲು ಪ್ರಧಾನಿ ಮೋದಿ ದೇಶ ಬಾಂಧವರಿಗೆ ಅತ್ಯಾಪ್ತ ಪತ್ರ ಬರೆದಿದ್ದಾರೆ.

**ಕಳೆದ ವರ್ಷ ಈ ದಿನ (ಮೇ 30,2019)** : ಭಾರತೀಯ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಸುವರ್ಣ ಅಧ್ಯಾಯ ಆರಂಭವಾಯಿತು. ಸಾಮಾನ್ಯ ದಿನಗಳಲ್ಲಿ ನಾನು ನಿಮ್ಮ ನಡುವೆ ಇದ್ದು, ಸರ್ಕಾರದ ಈ ವಾರ್ಷಿಕೋತ್ಸವವನ್ನು ಸಂಭ್ರಮಿಸುತ್ತಿದ್ದೆ. ಆದರೆ, ಕೊರೊನಾದ ಸಂದಿಗ್ಧತೆ ಅದಕ್ಕೀಗ ಅನುಮತಿಸುತ್ತಿಲ್ಲ. ಅದಕ್ಕಾಗಿ ಈ ಪತ್ರದ ಮೂಲಕ ನಿಮ್ಮ ಆಶೀರ್ವಾದ ಪಡೆಯುತ್ತಿದ್ದೇನೆ ಎಂದು ಆರಂಭದಲ್ಲೇ ಮೋದಿ, ತಾವು ಪತ್ರ ಬರೆಯಲು ಹಿಂದಿರುವ ಸಕಾರಣ ತಿಳಿಸಿದ್ದಾರೆ.

ಕೊರೊನಾ ವೈರಾಣು ದೇಶಕ್ಕೆ ದಾಳಿಗೈದಾಗ ಭಾರತ ನಲುಗಿ ಹೋಗುತ್ತೇ ಅಂತಲೇ ಹಲವರು ಊಹಿಸಿದ್ದರು. ಆದರೆ ವಿಶ್ವದ ಪ್ರಬಲ ಮತ್ತು ಸಮೃದ್ಧ ದೇಶಗಳಿಗೂ ಸಾಟಿ ಇಲ್ಲದಂತೆ, ಲಾಕ್‌ಡೌನ್ ನಿಯಮ ಪಾಲನೆಯಲ್ಲಿ 'ಏಕ ಭಾರತ ಶ್ರೇಷ್ಠ ಭಾರತ' ಪರಿಕಲ್ಪನೆಯನ್ನು ಎತ್ತಿಹಿಡಿದಿದ್ದೀರಿ. ಚಪ್ಪಾಳೆ ತಟ್ಟಿ, ದೀಪ ಬೆಳಗಿ ಕೊರೊನಾ ಯೋಧರನ್ನು ಗೌರವಿಸಿದ್ದೀರಿ' ಎಂದು ಶ್ಲಾಘಿಸಿದ್ದಾರೆ.

**ಮಿಡಿತ–ತುಡಿತ:–** ಇಷ್ಟು ದೊಡ್ಡ ಪ್ರಮಾಣದ ಬಿಕ್ಕಟ್ಟು ಎದುರಿಸುತ್ತಿರುವಾಗ ಅನಾನುಕೂಲತೆ ಸಂಭವಿಸಿಲ್ಲ ಎಂದು ಖಡಾಖಂಡಿತವಾಗಿ ಹೇಳಲಾರೆ. ನಮ್ಮ ಕಾರ್ಮಿಕರು, ವಲಸೆ ಕಾರ್ಮಿಕರು, ಸಣ್ಣ ಪ್ರಮಾಣದ ಕೈಗಾರಿಕೆಗಳ ಕುಶಲಜೀವಿಗಳು, ವ್ಯಾಪಾರಿಗಳು, ಅಲ್ಲದೆ ಇತರೆ ದೇಶವಾಸಿಗಳು ಭಾರೀ ದು:ಖಕ್ಕೆ ಗುರಿಯಾಗಿದ್ದಕ್ಕೆ ಖೇದವಿದೆ. ನಾವೆಲ್ಲರೂ ದುಡಿದು ಅವರ ಕಣ್ಣೀರು ಒರೆಸೋಣ. ಅದರ ಜೊತೆಯಲ್ಲೆ, ಕೊರೊನಾ ವಿಚಾರದಲ್ಲಿ ಅಚ್ಚರಿಯ ಗೆಲುವು ಸಾಧಿಸಿದ ಮಾದರಿಯಲ್ಲೇ, ಆರ್ಥಿಕ ಪುನರುಜ್ಜೀವನದಲ್ಲೂ ವಿಶ್ವದ ಮುಂದೆ ಸೂಕ್ತ ಉದಾಹರಣೆಯಾಗಿ ಭಾರತವನ್ನು ನಿಲ್ಲಿಸೋಣ.

ಈ ಸಂದಿಗ್ಧ ಕಾಲಾವಧಿಯಲ್ಲಿ ನಾವು ಸ್ವಾವಲಂಬಿಗಳಾಗಲು, ಆತ್ಮನಿರ್ಭರ ಭಾರತ ಕಟ್ಟಲು ರೂ.20ಲಕ್ಷ ಕೋಟಿ ಪ್ಯಾಕೇಜ್ ಅನ್ನು ಮೀಸಲಿಡಲಾಗಿದೆ. ಇದು ಪ್ರತಿ ಭಾರತೀಯನ ಮುಂದೆ ಅವಕಾಶಗಳನ್ನು ತೆರೆದಿಟ್ಟು ಹೊಸಯುಗಕ್ಕೆ ನಾಂದಿ ಹಾಡಲಿದೆ. ರೈತರು, ಕಾರ್ಮಿಕರು, ಸಣ್ಣ ಉದ್ಯಮಿಗಳು ಅಥವಾ ಸ್ಟಾರ್ಟ್‌ಅಪ್‌ನ ಯುವಕರಿಗೂ ಇದರ ಪ್ರಯೋಜನ ದಕ್ಕಲಿದೆ. ಇದು ಆಮದು ತಗ್ಗಿಸಿ ಸ್ವಾವಲಂಬಿ ಭಾರತವನ್ನು ಸೃಷ್ಟಿಸುತ್ತದೆ.

ದೇಶದ ಸವಾಲುಗಳನ್ನು ಗೆಲ್ಲಲು ಹಗಲು–ರಾತ್ರಿ ದುಡಿಯುತ್ತಿದ್ದೇವೆ. ಒಂದು ಪಕ್ಷ ನನ್ನಲ್ಲಿ ನ್ಯೂನತೆಗಳು ಇರಬಹುದು; ಆದರೆ ದೇಶದಲ್ಲಿ ಯಾವುದೇ ಕೊರತೆಗಳೂ ಇಲ್ಲ. ನನ್ನ ಸಂಕಲ್ಪಕ್ಕೆ ಶಕ್ತಿಯ ಮೂಲವೆಂದರೆ ನೀವು, ನಿಮ್ಮ ಬೆಂಬಲ, ಆಶೀರ್ವಾದ ಮತ್ತು ನಿಮ್ಮ ಪ್ರೀತಿ. **'ಕೃತಂ ಮೆ ದಕ್ಷಿಣೆ ಹಸ್ತೆ, ಜಯೋ ಮೆ ಸತ್ಯ ಆಹಿತಃ'** ಎಂಬ ಮಾತುಂಟು. ಇದರರ್ಥ – 'ನಾವು ಒಂದು ಕಡೆ ಕ್ರಿಯೆ, ಕರ್ತವ್ಯದಲ್ಲಿ ಮುಳುಗಿದರೆ, ಮತ್ತೊಂದೆಡೆ ಯಶಸ್ಸು ಖಚಿತವಾಗುತ್ತದೆ.' ಎಂದು ನನ್ನ ದೇಶಕ್ಕಾಗಿ ಯಶಸ್ಸನ್ನು ಪ್ರಾರ್ಥಿಸುತ್ತಾ, ಮತ್ತೊಮ್ಮೆ ನಿಮಗೆ ನಮಸ್ಕರಿಸುತ್ತೇನೆ. **'ನಿಮಗೆ ನಿಮ್ಮ ಕುಟುಂಬಕ್ಕೆ ನನ್ನ ಹೃತ್ಪೂರ್ವಕ ಶುಭಾಷಯಗಳು' ನಿಮ್ಮ ಪ್ರಧಾನ ಸೇವಕ–ನರೇಂದ್ರ ಮೋದಿ.**

**ಚಾರಿತ್ರಿಕ ಸಾಧನೆ ಉಲ್ಲೇಖ:–**

1. ಕಾಶ್ಮೀರದ 370ನೇ ವಿಧಿ ರಾಷ್ಟ್ರೀಯ ಏಕತೆ ಮತ್ತು ಏಕೀಕರಣದ ಮನೋಭಾವವನ್ನು ಹೆಚ್ಚಿಸಿದೆ.
2. ಸುಪ್ರೀಂಕೋರ್ಟ್‌ನ ಗೌರವಾನ್ವಿತ ತೀರ್ಪು, ಶತಮಾನಗಳ ರಾಮಮಂದಿರ ಸಮಸ್ಯೆಗೆ ಸೌಹಾರ್ದ ಅಂತ್ಯ ಕಲ್ಪಿಸಿದೆ.
3. ತ್ರಿವಳಿ ತಲಾಖ್ ಇತಿಹಾಸದ ನಿಷೇಧ.
4. ಪೌರತ್ವ ಕಾಯ್ದೆ ತಿದ್ದುಪಡಿ, ಭಾರತದ ಕಾರುಣ್ಯ ಮತ್ತು ಅಂತರ್ಗತ ಮನೋಭಾವದಭಿವ್ಯಕ್ತಿಯಾಗಿದೆ.

5. ರಕ್ಷಣಾ ಪಡೆಗಳ ಮುಖ್ಯಸ್ಥರ ಹುದ್ದೆ ರಚನೆ ಮೂರು ದಳಗಳೊಂದಿಗೆ ಸಮನ್ವಯತೆ ಸಾಧಿಸಿದೆ.
6. ಇಷ್ಟೆಲ್ಲಾ ಸವಾಲುಗಳ ನಡುವೆಯೂ ಭಾರತ 2022ರ 'ಮಿಷನ್ ಗಗನಯಾನ'ಕ್ಕೆ ಸಜ್ಜುಗೊಂಡಿದೆ.
7. ಪಿಎಂ ಕಿಸಾನ್ ಸಮ್ಮಾನ್ ನಿಧಿಯಡಿ ಒಂದು ವರ್ಷದಲ್ಲಿ ರೂ.72 ಕೋಟಿಗಳಿಗೂ ಅಧಿಕ ಹಣ ರೂ.9.50 ಕೋಟಿ ರೈತರ ಖಾತೆಗಳಿಗೆ ಜಮೆ.
8. ಜಲಜೀವನ್ ಮಿಷನ್ ಯೋಜನೆಯಡಿ ರೂ.15 ಕೋಟಿಗೂ ಅಧಿಕ ಗ್ರಾಮೀಣ ಕುಟುಂಬಗಳಿಗೆ ಪೈಪ್ ಮೂಲಕ ಶುದ್ಧ ಜಲ ವಿತರಣೆ ಗುರಿ.
9. ರೂ.50 ಕೋಟಿ ಜಾನುವಾರುಗಳ ಉತ್ತಮ ಆರೋಗ್ಯಕ್ಕಾಗಿ ಉಚಿತ ವ್ಯಾಕ್ಸಿನೇಷನ್ ನಡೆಸುವ ಬೃಹತ್ ಅಭಿಯಾನ ಚಾಲ್ತಿ.
10. ರೈತರು, ಕೃಷಿ ಕಾರ್ಮಿಕರು ಸೇರಿದಂತೆ ಅಸಂಘಟಿತ ವಲಯದ 60 ವರ್ಷ ದಾಟಿದ ಹಿರಿಯರಿಗೆ ಮಾಸಿಕ ರೂ.3 ಸಾವಿರಗಳ ಅನಿಯಮಿತ ಪಿಂಚಣಿಯ ಭರವಸೆ.
11. ಮೀನುಗಾರರಿಗೆ ಬ್ಯಾಂಕ್ ಸಾಲ ಸೌಲಭ್ಯ ಪಡೆಯುವ ಜೊತೆಗೆ, ಪ್ರತ್ಯೇಕ ಇಲಾಖೆ ರಚನೆ.
12. ವ್ಯಾಪಾರಿಗಳ ಸಮಸ್ಯೆಗಳನ್ನು ಪರಿಹರಿಸಲು 'ವ್ಯಾಪಾರಿ ಕಲ್ಯಾಣ್ ಮಂಡಳಿ' ಯನ್ನು ಸ್ಥಾಪಿಸಲು ನಿರ್ಧಾರ.
13. ಸ್ವಸಹಾಯ ಗುಂಪುಗಳ ರೂ.7 ಕೋಟಿಗೂ ಅಧಿಕ ಮಹಿಳೆಯರಿಗೆ ಹೆಚ್ಚಿನ ಆರ್ಥಿಕ ನೆರವು. ಸ್ವಸಹಾಯ ಸಂಘಗಳಿಗೆ ರೂ.10 ಲಕ್ಷ ಸಾಲದ ಮೊತ್ತ, ಈಗ ಗ್ಯಾರಂಟಿ ಇಲ್ಲದೆ ರೂ. 20 ಲಕ್ಷ ಏರಿಕೆ.
14. ಬುಡಕಟ್ಟು ಮಕ್ಕಳ ಶಿಕ್ಷಣವನ್ನು ಗಮನದಲ್ಲಿಟ್ಟುಕೊಂಡು, 400ಕ್ಕೂ ಅಧಿಕ ಹೊಸ ಏಕಲವ್ಯ ಮಾದರಿ ವಸತಿ ಶಾಲೆಗಳ ನಿರ್ಮಾಣ ಆರಂಭ.

ಆಧಾರ:ಉದಯವಾಣಿ, ದಿನಾಂಕ: 31.05.2020